# ಕರ್ನಾಟಕ ಸರ್ಕಾರ

## ಕರ್ನಾಟಕ ವಿಧಾನ ಪರಿಷತ್ತು

## 147ನೇ ಅಧಿವೇಶನ-2022

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 82(66) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 12.09.2022 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಹಿಂದುಳಿದ ವರ್ಗಗಳ ಇಲಾಖೆಯಿಂದ ತಿಗಳ ಮತ್ತು ಅದರ ಉಪಜಾತಿಗಳ ಕುಲಶಾಸ್ತ್ರ ಅಧ್ಯಯನ ಮಾಡಲು ರಾಜ್ಯ ಸರ್ಕಾರದಿಂದ ಆದೇಶಿಸಲಾಗಿದೆಯೇ; | ಹೌದು, ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ತಿಗಳ ಮತ್ತು ಅದರ ಉಪಜಾತಿಗಳ ಕುಲಶಾಸ್ತ್ರೀಯ ಅಧ್ಯಯನ ನಡೆಸಲು ಹಿಂದುಳಿದ ವರ್ಗಗಳ ಇಲಾಖೆಯಡಿಯ ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆಯಿಂದ ರೂ. 6.25 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆಗೊಳಿಸಲಾಗಿದೆ. |
| (ಆ) | ಆದೇಶಿಸಿದ್ದಲ್ಲಿ, ಬೆಂಗಳೂರು ವಿಶ್ವವಿದ್ಯಾಲಯವು ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | 1. ತಿಗಳ ಮತ್ತು ಅದರ ಉಪಜಾತಿಗಳ ಕುಲಶಾಸ್ತ್ರೀಯ ಅಧ್ಯಯನ ನಡೆಸಲು ಡಾ. ಸಿ. ಸೋಮಶೇಖರ್, ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಸಮಾಜಶಾಸ್ತ್ರ ಅಧ್ಯಯನ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ ಇವರನ್ನು ಬೆಂಗಳೂರು ವಿಶ್ವವಿದ್ಯಾಲಯದ ಅಧಿಸೂಚನೆ ಸಂಖ್ಯೆ:ಡಿಇವಿ/ಡಿ1/ಅಭಿವೃದ್ಧಿ/ಕ.ಸರ್ಕಾರ, ದಿನಾಂಕ:16.08.2022ರನ್ವಯ ಸಂಯೋಜಕರನ್ನಾಗಿ ನೇಮಿಸಲಾಗಿದೆ.<br>2. ಬೆಂಗಳೂರು ವಿಶ್ವವಿದ್ಯಾಲಯ ಹಾಗೂ ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆಗಳ ನಡುವೆ ತಿಳುವಳಿಕೆ ಒಪ್ಪಂದದ |

| | | |
|---|---|---|
| | | ಪ್ರಲೇಖವನ್ನು (MoU) ಮಾಡಿಕೊಳ್ಳಲಾಗಿದೆ.<br>3. ದಿನಾಂಕ: 05.09.2022ರಂದು ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆಯ ವತಿಯಿಂದ ನಡೆದ ತಿಗಳ ಜನಾಂಗದ ಮತ್ತು ಅದರ ಉಪಜಾತಿಗಳ ಕುಲಶಾಸ್ತ್ರೀಯ ಅಧ್ಯಯನಕ್ಕೆ ಸಂಬಂಧಿಸಿದಂತೆ ನಡೆದ ಸಭೆಯ ನಿರ್ಣಯದಂತೆ, ತಿಗಳ ಜನಾಂಗದ ಕುಲಶಾಸ್ತ್ರೀಯ ಅಧ್ಯಯನ ನಡೆಸಲು ದಿನಾಂಕ:05.09.2022ರಂದು ನಿರ್ದೇಶಕರು, ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆ ಇವರಿಂದ ಕಾರ್ಯಾದೇಶ ಪಡೆಯಲಾಗಿದೆ. |

**ಸಂಖ್ಯೆ: ಇಡಿ/ 491 /ಯುಬಿವಿ /2022**

**(ಡಾ|| ಅಶ್ವತ್ ನಾರಾಯಣ ಸಿ.ಎನ್)**

ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ ಮತ್ತುಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು